ಕರ್ನಾಟಕ ಸರ್ಕಾರ

ನಿರ್ದೇಶಕರ ಕಚೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-560012.

Email: commissioner.puc@gmail.com Phone No. 080-23562033

ಸಂಖ್ಯೆ: DPUE-EST10-LAP-2-2022-E-729701 ದಿನಾಂಕ: 17-10-2022.

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು.

ಮಾನ್ಯರೆ,

ವಿಷಯ:- ಪದವಿ ಪೂರ್ವ ಶಿಕ್ಷಣ ಇಲಾಖೆಯ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿಯಿರುವ ವಿವಿಧ ವಿಷಯಗಳ ಉಪನ್ಯಾಸಕರ ಖಾಲಿ ಹುದ್ದೆಗಳಿಗೆ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಮೀಸಲಾತಿ ಸಂಬಂಧ ಮಾರ್ಗದರ್ಶನ ಕೋರಿ.

ಉಲ್ಲೇಖ:-1. ಈ ಕಚೇರಿ ಸಮಸಂಖ್ಯೆ ಪತ್ರ ದಿನಾಂಕ:28-12-2021 ಹಾಗೂ 19-03-2021.
2. ಸರ್ಕಾರದ ಪತ್ರ ಸಂಖ್ಯೆ ಇಪಿ 25 ಡಿಜಿಡಿ 2022, ದಿನಾಂಕ:02-08-2022.
3. ಸರ್ಕಾರದ ಪತ್ರ ಸಂಖ್ಯೆ ಇಪಿ 9 ಡಿಜಿಡಿ 2022, ದಿನಾಂಕ:18-08-2022.
4. ಸರ್ಕಾರದ ಪತ್ರ ಸಂಖ್ಯೆ ಇಡಿ 161 ಡಿಜಿಡಿ 2015, ದಿನಾಂಕ:12-02-2018.

-*-

ಪದವಿ ಪೂರ್ವ ಶಿಕ್ಷಣ ಇಲಾಖೆಯ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿಯಿದ್ದ 10 ವಿಷಯಗಳ 1439 ಉಪನ್ಯಾಸಕರ ನೇಮಕಾತಿಗೆ ಸಂಬಂಧಿಸಿದಂತೆ ಉಲ್ಲೇಖ-1ರ ಪತ್ರದಲ್ಲಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿತ್ತು. ಮುಂದುವರೆದು, ಕಲ್ಯಾಣ ಕರ್ನಾಟಕ ಭಾಗದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿಯಿದ್ದ 7 ವಿಷಯಗಳ 36 ಉಪನ್ಯಾಸಕರ ಹುದ್ದೆಗಳನ್ನು ಭರ್ತಿ ಮಾಡಲು ಉಲ್ಲೇಖ-1ರ ದಿನಾಂಕ:19-03-2022ರ ಪತ್ರದಲ್ಲಿ ಸರ್ಕಾರವನ್ನು ಕೋರಲಾಗಿತ್ತು.

ಪದವಿ ಪೂರ್ವ ಶಿಕ್ಷಣ ಇಲಾಖೆಯ ಕಲ್ಯಾಣ ಕರ್ನಾಟಕ ಭಾಗದಲ್ಲಿ 371-ಜೆಗೆ ಮೀಸಲಿರುವ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ವೃಂದದಲ್ಲಿ ಖಾಲಿಯಿರುವ 7 ವಿವಿಧ ವಿಷಯಗಳ ಒಟ್ಟು 36 ಉಪನ್ಯಾಸಕರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಉಲ್ಲೇಖ-2ರಂತೆ ಸರ್ಕಾರದ ಅನುಮತಿ ನೀಡಲಾಗಿರುತ್ತದೆ.

ಪದವಿ ಪೂರ್ವ ಶಿಕ್ಷಣ ಇಲಾಖೆಯ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ 10 ವಿಷಯಗಳ ಒಟ್ಟು 778 ಉಪನ್ಯಾಸಕರ ಹುದ್ದೆಗಳಿಗೆ ನೇರ ನೇಮಕಾತಿ ಮೂಲಕ ಭರ್ತಿ ಮಾಡಿಕೊಳ್ಳಲು ಉಲ್ಲೇಖ-3ರಂತೆ ಸರ್ಕಾರದ ಅನುಮತಿ ನೀಡಿ ಆದೇಶಿಸಲಾಗಿರುತ್ತದೆ.

ಮಾನ್ಯ ಸಮಾಜ ಕಲ್ಯಾಣ ಇಲಾಖಾ ಸಚಿವರ ಅಧ್ಯಕ್ಷತೆಯಲ್ಲಿ ದಿನಾಂಕ:22-06-2016ರಂದು ನಡೆದ ಸಭೆಯಲ್ಲಿ ಖಾಸಗಿ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿನ ಉಪನ್ಯಾಸಕರ ಹುದ್ದೆಗಳನ್ನು ಆಯಾ ವಿಷಯದ ಏಕೈಕ ಹುದ್ದೆಗಳೆಂದು ಪರಿಗಣಿಸಿ, ಮೀಸಲಾತಿ ನಿಯಮ ಅನ್ವಯವಾಗದಂತೆ ಮಾನ್ಯ

..2

ಸರ್ವೋಚ್ಚ ನ್ಯಾಯಾಲಯವು ನೀಡಿರುವ ತೀರ್ಪಿನ ಕುರಿತು ಸುದೀರ್ಘವಾಗಿ ಚರ್ಚಿಸಿ, ಈ ರೀತಿಯ ಮೀಸಲಾತಿ ಕ್ರಮದಿಂದ ಅನುದಾನಿತ ಕಾಲೇಜುಗಳಲ್ಲಿನ ಹುದ್ದೆಗಳ ಮೀಸಲಾತಿ ಸಂಬಂಧದಲ್ಲಿ ಸಮಸ್ಯೆ ಉಂಟಾಗಿರುತ್ತದೆ ಮತ್ತು ಸರ್ಕಾರಿ ನೇಮಕಾತಿಗಳಲ್ಲಿಯೂ ಇದನ್ನು ಸರಿಪಡಿಸಬೇಕಾಗಿರುತ್ತದೆ. ಆದ್ದರಿಂದ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ಉಪನ್ಯಾಸಕರ ಹುದ್ದೆಗಳನ್ನು ಮೀಸಲಾತಿ ಉದ್ದೇಶಕ್ಕಾಗಿ ಆಯಾ ವಿಷಯದ ಪ್ರತ್ಯೇಕ ಹುದ್ದೆಗಳೆಂದು ಪರಿಗಣಿಸುವ ಬದಲಾಗಿ ಆಯಾ ಕಾಲೇಜಿನ ಒಟ್ಟು ಉಪನ್ಯಾಸಕರ ಹುದ್ದೆಗಳಿಗೆ ಮೀಸಲಾತಿ ನಿಗದಿಪಡಿಸುವ ಬಗ್ಗೆ ಕ್ರಮ ಕೈಗೊಳ್ಳಬೇಕಾಗಿರುತ್ತದೆ ಎಂದು ಅಭಿಪ್ರಾಯ ವ್ಯಕ್ತವಾಗಿರುತ್ತದೆ. ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಉಪನ್ಯಾಸಕರ ಹುದ್ದೆಯನ್ನು ಒಂದು ವೃಂದವೆಂದು ಪರಿಗಣಿಸಲಾಗಿರುತ್ತದೆ. ಈ ಹಿನ್ನೆಲೆಯಲ್ಲಿ, ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ಹುದ್ದೆಗಳಿಗೆ ಸಂಬಂಧಿಸಿದಂತೆ ಪ್ರಸ್ತುತ ಪ್ರತೀ ವಿಷಯದ ಉಪನ್ಯಾಸಕರ ಹುದ್ದೆಗಳಿಗೆ ಪ್ರತ್ಯೇಕವಾಗಿ ಮೀಸಲಾತಿಯನ್ನು ನಿಗದಿಪಡಿಸುವ ಬದಲಾಗಿ ಎಲ್ಲಾ ವಿಷಯಗಳ ಉಪನ್ಯಾಸಕರ ಹುದ್ದೆಗಳನ್ನು ಒಂದು ವೃಂದದ ಹುದ್ದೆಯೆಂದು ಪರಿಗಣಿಸಿ, ಮೀಸಲಾತಿಯನ್ನು ಅನ್ವಯಿಸಬೇಕಾಗುತ್ತದೆ ಎಂದು ಉಲ್ಲೇಖ-3ರ ಸರ್ಕಾರದ ಪತ್ರದಲ್ಲಿ ತಿಳಿಸಲಾಗಿರುತ್ತದೆ.

ಆದ್ದರಿಂದ, ಮೇಲಿನ ಎಲ್ಲಾ ಅಂಶಗಳನ್ನು ಅವಗಾಹನೆಗೆ ಸಲ್ಲಿಸುತ್ತಾ, ಪ್ರಸ್ತುತ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿಯಿರುವ 778 ವಿವಿಧ ವಿಷಯಗಳ ಉಪನ್ಯಾಸಕರ ಹುದ್ದೆಗಳ ನೇಮಕಾತಿಯಲ್ಲಿ, ಹಿಂದಿನ ನೇಮಕಾತಿಯಲ್ಲಿ ಅಂತ್ಯಗೊಂಡ ವಿವಿಧ ವಿಷಯಗಳ ಮೀಸಲಾತಿ ಬಿಂದುಗಳನ್ನೇ ಮುಂದುವರೆಸಿಕೊಂಡು ನೇಮಕಾತಿ ಪ್ರಕ್ರಿಯೆ ಕೈಗೊಳ್ಳಬೇಕೆ ಅಥವಾ ಉಲ್ಲೇಖ-3ರ ಸರ್ಕಾರದ ಪತ್ರದಲ್ಲಿ ತಿಳಿಸಿರುವಂತೆ, ಎಲ್ಲಾ ವಿಷಯಗಳ ಉಪನ್ಯಾಸಕರ ಹುದ್ದೆಗಳನ್ನು ಒಂದು ವೃಂದವೆಂದು ಪರಿಗಣಿಸಿ ಮೀಸಲಾತಿ ಮೊದಲನೇ ಬಿಂದುವಿನಿಂದ ಪ್ರಾರಂಭಿಸಿ ಪ್ರಕ್ರಿಯೆ ಕೈಗೊಳ್ಳಬೇಕೆ ಎಂಬುದರ ಬಗ್ಗೆ ಸರ್ಕಾರದಿಂದ ಸೂಕ್ತ ಮಾರ್ಗದರ್ಶನ ಕೋರಿದೆ.

ತಮ್ಮ ವಿಶ್ವಾಸಿ,

ನಿರ್ದೇಶಕರು,
ಪದವಿ ಪೂರ್ವ ಶಿಕ್ಷಣ ಇಲಾಖೆ.